# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತಾರನೆಯ ಅಧಿವೇಶನ**

**ಕಾರ್ಯಕಲಾಪಗಳ ಪಟ್ಟಿ**

**ಗುರುವಾರ, ದಿನಾಂಕ: 20ನೇ ಡಿಸೆಂಬರ್, 2018**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

******

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂಭತ್ತನೆಯ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂಭತ್ತನೆಯ ಪಟ್ಟಿ

## 02. ಚುನಾವಣಾ ಪ್ರಸ್ತಾವ

**ಮಾನ್ಯ ಸಭಾನಾಯಕರು:-**

ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದ ಸೆನೆಟ್‌ಗೆ ವಿಧಾನ ಪರಿಷತ್ತಿನ ಇಬ್ಬರು ಸದಸ್ಯರುಗಳನ್ನು ಹಾಗೂ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಸಿಂಡಿಕೇಟ್‌ಗೆ ವಿಧಾನ ಪರಿಷತ್ತಿನ ಒಬ್ಬ ಸದಸ್ಯರನ್ನು ಚುನಾಯಿಸುವ ಬದಲು ಮಾನ್ಯ ಸದಸ್ಯರುಗಳನ್ನು ನಾಮ ನಿರ್ದೇಶಿಸಲು ಮಾನ್ಯ ಸಭಾಪತಿಯವರಿಗೆ ಅಧಿಕಾರ ನೀಡುವ ಬಗ್ಗೆ ಪ್ರಸ್ತಾವವನ್ನು ಮಂಡಿಸುವುದು.

## 03. ಗಮನ ಸೆಳೆಯುವ ಸೂಚನೆಗಳು

**ಅ) ಶ್ರೀಯುತರುಗಳಾದ: ಮರಿತಿಬ್ಬೇಗೌಡ ಹಾಗೂ ಪುಟ್ಟಣ್ಣ** ಅವರುಗಳು ಪ್ರಾಥಮಿಕ, ಪ್ರೌಢ ಶಿಕ್ಷಣ ಹಾಗೂ ಪದವಿ ಪೂರ್ವ ಕಾಲೇಜಿನ ಶಿಕ್ಷಕರು/ಉಪನ್ಯಾಸಕರನ್ನು ಕಳೆದ ಮೂರು ವರ್ಷಗಳಿಂದ ವರ್ಗಾವಣೆ ಮಾಡದಿರುವುದರಿಂದ ಗುಣಮಟ್ಟದ ಶಿಕ್ಷಣಕ್ಕೆ ಅಡ್ಡಿಯುಂಟಾಗಿರುವ ಬಗ್ಗೆ **ಮಾನ್ಯ ಮುಖ್ಯಮಂತ್ರಿಯವರ** ಗಮನ ಸೆಳೆಯುವುದು.

**ಆ) ಶ್ರೀ ಎಂ. ನಾರಾಯಣಸ್ವಾಮಿ** ಅವರು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವತಿಯಿಂದ ನೆಟ್ಟಿರುವ ಸಸಿಗಳು ಸಮರ್ಪಕವಾಗಿ ಬೆಳವಣಿಗೆಯಾಗದಿರುವ ಬಗ್ಗೆ **ಮಾನ್ಯ ಉಪ ಮುಖ್ಯಮಂತ್ರಿಯವರ** ಗಮನ ಸೆಳೆಯುವುದು.

..2

**ಇ) ಶ್ರೀ ಕೆ. ಗೋವಿಂದರಾಜ್** ಅವರು ಬೆಂಗಳೂರು ನಗರದ ಟಿ. ಸಿದ್ದಲಿಂಗಯ್ಯ ರಸ್ತೆಯಲ್ಲಿರುವ ಜೆ.ಡಬ್ಲ್ಯೂ. ಮಾರಿಯೊಟ್ ಬೃಹತ್ ಕಟ್ಟಡ ನಿರ್ಮಾಣದಲ್ಲಿ ನಿಯಮ ಉಲ್ಲಂಘನೆ ಮತ್ತು ಕಟ್ಟಡ ನಿರ್ಮಾಣ ಅವ್ಯವಹಾರ ಕುರಿತು **ಮಾನ್ಯ ಉಪ ಮುಖ್ಯಮಂತ್ರಿಯವರ** ಗಮನ ಸೆಳೆಯುವುದು.

**ಈ) ಶ್ರೀಯುತರುಗಳಾದ: ಅರುಣ ಶಹಾಪುರ, ಮರಿತಿಬ್ಬೇಗೌಡ ಮತ್ತು ಪುಟ್ಟಣ್ಣ** ಅವರುಗಳು ಖಾಸಗಿ ಅನುದಾನಿತ ಪ್ರೌಢಶಾಲೆಗಳಲ್ಲಿ ಈ ಪೂರ್ವದಲ್ಲಿದ್ದಂತೆ ಮುಖ್ಯೋಪಾಧ್ಯಾಯರ ಹುದ್ದೆಯನ್ನು ಅನುಮೋದಿಸುವುದು ಹಾಗೂ ಪ್ರೌಢಶಾಲೆಗಳಲ್ಲಿ ಖಾಲಿ/ತೆರವಾದ ಹುದ್ದೆಗಳನ್ನು ತುಂಬಲು ನಿರ್ಬಂಧಿಸಿರುವ ಎಸ್.ಎಸ್.ಎಲ್.ಸಿ. ಜಿಲ್ಲಾ ಸರಾಸರಿ ಫಲಿತಾಂಶವನ್ನು ರದ್ದುಪಡಿಸುವ ಕುರಿತು **ಮಾನ್ಯ ಮುಖ್ಯಮಂತ್ರಿಯವರ** ಗಮನ ಸೆಳೆಯುವುದು.

**ಉ) ಡಾ: ತೇಜಸ್ವಿನಿಗೌಡ** ಅವರು ತೃತೀಯ ಲಿಂಗಿಗಳಿಗೆ ಉದ್ಯೋಗ ಭದ್ರತೆ ಮತ್ತು ಮಾಶಾಸನ ನೀಡುವ ಬಗ್ಗೆ **ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ** ಗಮನ ಸೆಳೆಯುವುದು.

**ಊ) ಡಾ: ವೈ.ಎ. ನಾರಾಯಣಸ್ವಾಮಿ** ಅವರು ಕೋಲಾರ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ಕೆರೆಗಳನ್ನು ತುಂಬಿಸಲು ಅನುಷ್ಠಾನಗೊಳಿಸುತ್ತಿರುವ ಕೆ.ಸಿ. ವ್ಯಾಲಿ ಹಾಗೂ ಹೆಚ್.ಎನ್. ವ್ಯಾಲಿಗಳ ಯೋಜನೆಗಳಿಂದಾಗಿ ಕೊಳಚೆ ನೀರನ್ನು ಸರಿಯಾಗಿ ಶುದ್ಧೀಕರಣ ಮಾಡದೇ ನೀರು ಹರಿಸುತ್ತಿರುವ ಬಗ್ಗೆ **ಮಾನ್ಯ ಸಣ್ಣ ನೀರಾವರಿ ಸಚಿವರ** ಗಮನ ಸೆಳೆಯುವುದು.

**ಋ) ಶ್ರೀಯುತರುಗಳಾದ: ಕೆ.ಸಿ. ಕೊಂಡಯ್ಯ, ಕೋಟ ಶ್ರೀನಿವಾಸ ಪೂಜಾರಿ (ವಿಧಾನ ಪರಿಷತ್ತಿನ ಮಾನ್ಯ ವಿರೋಧ ಪಕ್ಷದ ನಾಯಕರು) ಹಾಗೂ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕರು)** ಅವರುಗಳು ಗ್ರಾಮ ಪಂಚಾಯಿತಿ ಮಟ್ಟದ ಸರ್ಕಾರದ ಕಾರ್ಯಕ್ರಮಗಳನ್ನು ಗ್ರಾಮ ಪಂಚಾಯಿತಿಗಳ ಆಡಳಿತ ವ್ಯಾಪ್ತಿಗೆ ತರದೇ ಇರುವ ಬಗ್ಗೆ **ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರ** ಗಮನ ಸೆಳೆಯುವುದು.

**ೠ) ಶ್ರೀ ಐವನ್ ಡಿ'ಸೋಜಾ** ಅವರು 'ಕ್ರೈಸ್ತ ಅಭಿವೃದ್ಧಿ ಪರಿಷತ್'ನ್ನು ಕ್ರೈಸ್ತ ಅಭಿವೃದ್ಧಿ ನಿಗಮವನ್ನಾಗಿ ಮಾರ್ಪಾಡು ಮಾಡಲು ಮತ್ತು ಒದಗಿಸಲಾಗಿರುವ ರೂ. 175 ಕೋಟಿ ಅನುದಾನವನ್ನು ರೂ. 300 ಕೋಟಿಗೆ ಏರಿಸಿ ಜನಸಂಖ್ಯೆ ಆಧಾರದಲ್ಲಿ ಅನುದಾನ ಮೀಸಲಿಡುವಂತೆ **ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳು, ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ವಕ್ಫ್ ಸಚಿವರ** ಗಮನ ಸೆಳೆಯುವುದು.

**ಎ) ಶ್ರೀ ಕೆ.ಪಿ. ನಂಜುಂಡಿ ವಿಶ್ವಕರ್ಮ** ಅವರು ರಾಜ್ಯದಲ್ಲಿ ಹೊಸ ತಾಲ್ಲೂಕು ರಚನೆ ಮಾಡಲು ಆದೇಶವಾಗಿದ್ದರೂ ಸಹ ತಾಲ್ಲೂಕು, ತಾಲ್ಲೂಕು ಪಂಚಾಯಿತಿ ವಿಂಗಡಣೆಯಾಗದಿರುವ ಹಾಗೂ ಕಛೇರಿಗಳನ್ನು ಪ್ರಾರಂಭಿಸದಿರುವ ಬಗ್ಗೆ **ಮಾನ್ಯ ಕಂದಾಯ ಹಾಗೂ ಕೌಶಲ್ಯ ಅಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ** ಗಮನ ಸೆಳೆಯುವುದು

**ಏ) ಶ್ರೀಯುತರುಗಳಾದ: ಕೋಟ ಶ್ರೀನಿವಾಸ ಪೂಜಾರಿ (ಮಾನ್ಯ ವಿರೋಧ ಪಕ್ಷದ ನಾಯಕರು), ಡಾ: ವೈ.ಎ. ನಾರಾಯಣಸ್ವಾಮಿ, ಎಸ್.ವ್ಹಿ. ಸಂಕನೂರ, ಲಹರ್ ಸಿಂಗ್ ಸಿರೋಯಾ, ಡಾ: ತೇಜಸ್ವಿನಿ ಗೌಡ ಹಾಗೂ ಇತರರು "ಸಕಾಲ"** ಯೋಜನೆಯನ್ನು ಅನುಷ್ಠಾನಗೊಳಿಸುವಲ್ಲಿ ಸರ್ಕಾರವು ವಿಫಲಗೊಂಡಿರುವ ಬಗ್ಗೆ **ಮಾನ್ಯ ಮುಖ್ಯಮಂತ್ರಿಯವರ** ಗಮನ ಸೆಳೆಯುವುದು.

**ಐ) ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಮಾನ್ಯ ವಿರೋಧ ಪಕ್ಷದ ನಾಯಕರು)** ಅವರು ಗ್ರಾಮ ಪಂಚಾಯತ್ ಗ್ರಂಥಾಲಯಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಗ್ರಂಥಪಾಲಕರು ಹಾಗೂ ಸಹಾಯಕ ಗ್ರಂಥಪಾಲಕರಿಗೆ ಕನಿಷ್ಠ ವೇತನ ಪಾವತಿಸದಿರುವುದು ಹಾಗೂ ಗ್ರಂಥಾಲಯಗಳ ಸಮಸ್ಯೆಗಳ ಬಗ್ಗೆ **ಮಾನ್ಯ ಮುಖ್ಯಮಂತ್ರಿಯವರ** ಗಮನ ಸೆಳೆಯುವುದು.

## ೦4. ನಿಯಮ ೩೩೦ರ ಮೇರೆಗೆ

**ಅ) ಶ್ರೀ ಎನ್. ರವಿಕುಮಾರ್** ಅವರು ರಾಜ್ಯ ಸರ್ಕಾರಿ ಶಾಲೆಗಳಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣದ ವಿದ್ಯಾರ್ಥಿಗಳಿಗೆ "ವಿದ್ಯಾವಿಕಾಸ ಯೋಜನೆ"ಯಡಿ ಸಮವಸ್ತ್ರ ವಿತರಣೆಯಲ್ಲಿ ಆಗಿರುವ ಅವ್ಯವಹಾರದ ಬಗ್ಗೆ ಪ್ರಸ್ತಾಪಿಸುವುದು.

**ಆ) ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ವಿಧಾನ ಪರಿಷತ್ತಿನ ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು)** ಅವರು ಬೆಳಗಾವಿ ಜಿಲ್ಲೆಯ ಪಶ್ಚಿಮ ಘಟ್ಟ ಪ್ರದೇಶದಲ್ಲಿನ ಖಾನಾಪುರ ತಾಲ್ಲೂಕಿನ ನೇರಸೆ, ಶಿರೋಳಿ ಹಾಗೂ ಇತರೆ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ವಾಸಿಸುತ್ತಿರುವ ಜನರಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸದಿರುವ ಬಗ್ಗೆ ಪ್ರಸ್ತಾಪಿಸುವುದು.

**ಇ) ಶ್ರೀಯುತರುಗಳಾದ: ಪಿ.ಆರ್.ರಮೇಶ್, ಹೆಚ್.ಎಂ. ರೇವಣ್ಣ ಹಾಗೂ ಎಂ.ಸಿ. ವೇಣುಗೋಪಾಲ್** ಅವರುಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿಯಲ್ಲಿ ಕಳೆದ ಐದು ವರ್ಷಗಳಲ್ಲಿ ಸವಿತಾ ಸಮಾಜ, ತಿಗಳ, ಮಡಿವಾಳ ಹಾಗೂ ಕುಂಬಾರ ಈ ಸಮುದಾಯಗಳ ಆರ್ಥಿಕ ಅಭಿವೃದ್ಧಿಗೆ ಮೀಸಲಿಟ್ಟ ಹಣವನ್ನು ವಿನಿಯೋಗಿಸದಿರುವ ಬಗ್ಗೆ ಪ್ರಸ್ತಾಪಿಸುವುದು.

**ಈ) ಶ್ರೀ ಎಂ.ಸಿ.ವೇಣುಗೋಪಾಲ್** ಅವರು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಹಂಚಿಕೆಯಾದ ನಿವೇಶನಗಳಲ್ಲಿ ಮನೆಗಳನ್ನು ನಿರ್ಮಾಣ ಮಾಡದಿರುವುದರಿಂದ, ಸದರಿ ನಿವೇಶನಗಳಲ್ಲಿ ಕಸ ಹಾಕುತ್ತಿರುವುದರಿಂದ ಸುತ್ತಮುತ್ತಲಿನ ಜನರಿಗೆ ತೊಂದರೆಯಾಗುತ್ತಿದ್ದು, ಪರಿಸರ ಹಾನಿಯಾಗುತ್ತಿರುವ ಬಗ್ಗೆ ಪ್ರಸ್ತಾಪಿಸುವುದು.

**ಉ) ಶ್ರೀ ಮರಿತಿಬ್ಬೇಗೌಡ** ಅವರು ಮೆಟ್ರೋ 2ನೇ ಹಂತದ ಕಾಮಗಾರಿಯಲ್ಲಿ ಶಿವಾಜಿನಗರದಿಂದ ನಾಗವಾರದವರೆಗೆ ಎಲಿವೇಟೆಡ್ ರಸ್ತೆ ನಿರ್ಮಾಣದಿಂದ ಗುತ್ತಿಗೆ ಪಡೆದು ನೋಂದಾಯಿತ ಒಪ್ಪಂದ ಮಾಡಿಕೊಂಡು ವ್ಯವಹಾರ ನಡೆಸುತ್ತಿರುವ ಗುತ್ತಿಗೆದಾರರಿಗೆ ಪರಿಹಾರ ನೀಡದಿರುವುದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಬಗ್ಗೆ ಪ್ರಸ್ತಾಪಿಸುವುದು.

..4

**ಊ) ಶ್ರೀ ಪುಟ್ಟಣ್ಣ** ಅವರು ರಾಜ್ಯದಲ್ಲಿ ಇತ್ತೀಚೆಗೆ ಕೆಲವು ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಮಕ್ಕಳಿಗೆ ತಂತ್ರಜ್ಞಾನದ ಹೆಸರಿನಲ್ಲಿ ಟ್ಯಾಬ್‌ಗಳನ್ನು ನೀಡುತ್ತಿರುವುದರಿಂದ ಉಂಟಾಗುವ ದುಷ್ಪರಿಣಾಮಗಳ ಬಗ್ಗೆ ಪ್ರಸ್ತಾಪಿಸುವುದು.

**ಋ) ಶ್ರೀ ಅ. ದೇವೇಗೌಡ** ಅವರು ಮಹಾತ್ಮಾ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಕಾರವಾರದ ಜಿಲ್ಲೆಯಲ್ಲಿ ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿದ್ದ ಕಂಪ್ಯೂಟರ್ ಆಪರೇಟರ್‌ಗಳನ್ನು ತೆಗೆದುಹಾಕಿರುವ ಬಗ್ಗೆ ಪ್ರಸ್ತಾಪಿಸುವುದು.

## ೦೫. ಅರ್ಧ ಗಂಟೆ ಕಾಲಾವಧಿ ಚರ್ಚೆ

ಅ) ಕೃಷ್ಣಾ ಕೊಳ್ಳದಲ್ಲಿ ''ಬಿ'' ಸ್ಕೀಂ ಅಡಿಯಲ್ಲಿ ರಾಜ್ಯಕ್ಕೆ ಹಂಚಿಕೆಯಾಗಿರುವ ನೀರು ಆಂಧ್ರ ಪ್ರದೇಶದ ಪಾಲಾಗುತ್ತಿರುವ ಬಗ್ಗೆ ಹಾಗೂ ಕೃಷ್ಣಾ ಮೇಲ್ದಂಡೆ ಯೋಜನೆಯ ಭೂಸ್ವಾಧೀನ ಕುರಿತು ದಿನಾಂಕ: 11.12.2018ರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆಗಳಾದ: 24(244) ಮತ್ತು 23(280)ಕ್ಕೆ ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯಗಳ ಬಗ್ಗೆ **ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ ಹಾಗೂ ಮಾನ್ಯ ಸದಸ್ಯರಾದ ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರುಗಳಿಂದ ಅರ್ಧಗಂಟೆ ಕಾಲಾವಧಿ ಚರ್ಚೆ.

ಆ) ಏಕರೂಪದಲ್ಲಿ ಪೊಲೀಸರ ನೇಮಕಾತಿ ಬಗ್ಗೆ ಹಾಗೂ ಔರಾದ್ಕರ್ ವರದಿ ಜಾರಿಯಾಗುವ ಕುರಿತು ದಿನಾಂಕ: 14.12.2018ರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆಗಳಾದ: 61(667) ಮತ್ತು 65(19)ಕ್ಕೆ ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯಗಳ ಬಗ್ಗೆ **ಮಾನ್ಯ ಸದಸ್ಯರುಗಳಾದ: ಶ್ರೀ ಆರ್. ಧರ್ಮಸೇನ ಮತ್ತು ಶ್ರೀ ಎಂ.ಕೆ. ಪ್ರಾಣೇಶ್** ಅವರುಗಳಿಂದ ಅರ್ಧಗಂಟೆ ಕಾಲಾವಧಿ ಚರ್ಚೆ.

ಇ) ಗಂಗಾ ಕಲ್ಯಾಣ ಯೋಜನೆ ಅವ್ಯವಹಾರದ ಕುರಿತು ದಿನಾಂಕ: 17.12.2018ರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 88(44)ಕ್ಕೆ ನೀಡಿದ ಉತ್ತರದಿಂದಾಗಿ ಉದ್ಭವಿಸಿದ ವಿಷಯದ ಬಗ್ಗೆ **ಶ್ರೀ ಎಂ.ಕೆ. ಪ್ರಾಣೇಶ್** ಅವರಿಂದ ಅರ್ಧಗಂಟೆ ಕಾಲಾವಧಿ ಚರ್ಚೆ.

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ (ಪ್ರ)**

---